# JAIN COLLEGE

463/465, 18th Main Road, SS Royal, 80 Feet Road, Rajarajeshwari Nagar,
Bangalore - 560 098

ದಿನಾಂಕ: /೧೨/೨೦೧೭ | ವಿಷಯ: **ಕನ್ನಡ**

## ದ್ವಿತೀಯ ಪಿ.ಯು.ಸಿ.

# Mock paper-1

**ಅವಧಿ – ೩.೦೦ ಗಂಟೆಗಳು** | **ಗರಿಷ್ಠ ಅಂಕಗಳು – ೧೦೦**

---

## <u>ಅ–ವಿಭಾಗ</u>

**I. ಎಲ್ಲಾ ಪ್ರಶ್ನೆಗಳಿಗೂ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ. 1x10=10**

೧. ಕಲಿ ಭೀಮ ಎಂಥ ಗಂಡನೆಂದು ದ್ರೌಪದಿ ಹೇಳಿದ್ದಾಳೆ?

೨. ತಾಯಿಯನ್ನು ಯಾವಾಗ ನೆನೆಯಬೇಕು?

೩. ಯಾರ ಕಂಬನಿಯನ್ನೊರೆಸಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ?

೪. ಹತ್ತಿಯ ಬೀಜಕ್ಕೆ ಯಾವುದು ತಪ್ಪದ ಕರ್ಮ?

೫. ಸ್ಥಳೀಯ ಭಾಷೆ ಕಲಿಯದ ಅನ್ಯಭಾಷಿಕರು ಏನಾಗುತ್ತಾರೆ?

೬. ಧಣಿಗಳ ಮನೆಯ ಪಕ್ಕದಲ್ಲಿ ಯಾವ ಹೊಳೆ ಹರಿಯುತ್ತಿತ್ತು?

೭. ಮನೋರಮೆ ಬಹುಮಾನವಾಗಿ ಮುದ್ದಣನಿಗೆ ಏನನ್ನು ಕೊಡುವೆನೆಂದಳು?

೮. ಪೋಸ್ಟಮನ್ ಜಬ್ಬಾರನಿಗೆ ಒದಗಿದ ತೊಂದರೆ ಏನು?

೯. ಆನೆಯು ಹಿಂದೆ ಯಾವ ಮಠದಲ್ಲಿತ್ತು?

೧೦. ನಿರೂಪಕರಿಗಿದ್ದ ಕೆಟ್ಟ ಕುತೂಹಲ ಯಾವುದು?

## <u>ಆ–ವಿಭಾಗ</u>

**II. ಅ. ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x4=8**

೧೧. ಸೀತೆಯ ತಲ್ಲಣಕ್ಕೆ ಕಾರಣವೇನು?

೧೨. ಎಣ್ಣೆ ತೀರಿದ ದೀಪಗಳು ಏನನ್ನು ಸೂಚಿಸುತ್ತವೆ?

೧೩. ಧನ ಮತ್ತು ಸುತನ ವಿಷಯದಲ್ಲಿ ಸೋಮನಾಥನ ಅಭಿಪ್ರಾಯವೇನು?

೧೪. ಮೊಮ್ಮಗಳ ಆತುರಕ್ಕೆ ಮುದುಕಿ ಏನೆಂದುಕೊಂಡಳು?

೧೫. ತಂದೆ ಮಗುವಿಗೆ ಕಾಣಿಸಿಕೊಳ್ಳುವ ಬಗೆ ಹೇಗೆ?

**ಆ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

೧೬. ಧಣಿಪತ್ನಿ ಲೋಟವನ್ನು ಹೇಗೆ ಪರಿಚಯಿಸಿದ್ದಾಳೆ?

೧೭. ಪಟ್ಟಣದ ಹೋಟೆಲಿನ ಕಟ್ಟಡ ಹೇಗಿದೆ?

೧೮. ಲೇಖಕರಲ್ಲಿ ಕನ್ನಡ ಪ್ರೀತಿ ಸ್ಫುರಿಸಿದ್ದು ಹೇಗೆ?

೧೯. "ನೀರಿಳಿಯದ ಗಂಟಲಲ್ಲಿ ಕಡುಬನ್ನು ತುರುಕಿದಂತಾಯ್ತು" ಎಂದು ಎಂದು ಮನೋರಮೆ ಹೇಳಿದ್ದೇಕೆ?

**ಇ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ. 2x3=6**

೨೦. ಕಾಡಪ್ಪ ಶೆಟ್ಟರು ಯಾವ ವರ್ತಮಾನವನ್ನು ಮುಟ್ಟಿಸಿದರು?

೨೧. ಡ್ರೈವರ್ ಅಬ್ಬಾಸ್,ಕ್ಲೀನರ್ ಕೃಷ್ಣರ ಸಾವಿಗೆ ಕಾರಣವೇನು?

೨೨. ಜಬ್ಬಾರ್ ನಿರೂಪಕರಿಗೆ ಅಂಚೆ ವಿಲೇವಾರಿ ಬಗ್ಗೆ ಅಸಡ್ಡೆಯಿಂದ ಹೇಳಿದ್ದೇನು?

೨೩. ಸೊರಗಿದ್ದ ಆನೆಯನ್ನು ಕೃಷ್ಣೇಗೌಡ ಹೇಗೆ ಸಾಕಿದನು?

## ಇ–ವಿಭಾಗ

**III. ಅ. ಯಾವುದಾದರೂ ಎರಡು ವಾಕ್ಯಗಳ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x2=6**

೨೪. ಜ್ಯೋತಿ ನೀನ್ಯಾರ ಹೋಲಾರ

೨೫. ನಾರುವ ದುರ್ಗಂಧ ಬಿಡಬಲ್ಲುದೆ

೨೬. ಮರಣ ಬಂದೀತು ಕ್ಷಣವು ಉರುಳಿ

**ಆ. ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x1=3**

೨೭. ಹಾಡುವುದು ಅವುಗಳಿಗೆ ಅನಿವಾರ್ಯ:ಅವುಗಳ ಕರ್ಮ.

೨೮. ಪದ್ಯಂ ವದ್ಯಂ,ಗದ್ಯಂ ಹೃದ್ಯಂ

**ಇ. ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 3x1=3**

೨೯. ಆನೆಗೂ ಮಾನ ಮರ್ಯಾದೆ ಇರುತ್ತೆ ತಿಳುಕೊ.

೩೦. ನಂಗೇನು ಈ ನಾಯಿಗಳನ್ನು ಕಂಡರೆ ಪ್ರೀತಿನಾ ಸ್ವಾಮಿ.

## ಈ–ವಿಭಾಗ

**IV. ಅ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿರಿ. 4x3=12**

೩೧. ರಾವಣನಲ್ಲಿ ಕಂಡು ಬರುವ ಪಶ್ಚಾತ್ತಾಪವನ್ನು ಕವಿ ಹೇಗೆ ನಿರೂಪಿಸಿದ್ದಾರೆ?

೩೨. ರಕ್ಷಿಸಬೇಕಾದವರೆ ಭಕ್ಷಕರಾದರೆ ಒದಗುವ ವಿಘಟನೆಯನ್ನು ಬಸವಣ್ಣನವರು ಹೇಗೆ ಚಿತ್ರಿಸಿದ್ದಾರೆ?

೩೩ ಯಾವ ಸ್ಥಳಗಳಲ್ಲಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ?ಚರ್ಚಿಸಿ:

೩೪. ‘ಹತ್ತಿ...ಚಿತ್ತ.. ಮತ್ತು..’ ಕವಿತೆಯ ಸ್ವಾರಸ್ಯವನ್ನು ಚರ್ಚಿಸಿ:

**ಆ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

೩೫. ಬಸಲಿಂಗ ಎದಿರಿಸುತ್ತಿದ್ದ ಸಮಸ್ಯೆಗಳು ಯಾವುವು?

೩೬. ಬದುಕಿನಲ್ಲಿ ಆಯ್ಕೆಗಳು ಮುಖ್ಯ ಎಂಬುವುದನ್ನು ಲೇಖಕಿ ಹೇಗೆ ನಿರೂಪಿಸಿದ್ದಾರೆ?

೩೭. ಧಣಿ ಹಾಗೂ ಹೊಳೆಯ ನಡುವಿನ ಸಮರವನ್ನು ಚಿತ್ರಿಸಿ:

**ಇ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

೩೮. ಆನೆಯು ಬಾಯಿಲ್ಲದ ಜನರ ಸಂಕೇತವಾಗಿರುವುದನ್ನು ವಿಶ್ಲೇಷಿಸಿ:

೩೯. ದುರ್ಗಪ್ಪನಿಗೆ ಲೈನ್ ಮನ್ ಕೆಲಸ ರೋಸಿ ಹೋಗಲು ಕಾರಣವೇನು?

೪೦. ಬೀದಿ ನಾಯಿಗಳ ನಿವಾರಣೆಗೆ ಖಾನ್ ಸಾಹೇಬರು ತೆಗೆದುಕೊಂಡಿದ್ದ ಕ್ರಮಗಳೇನು?

## ಉ–ವಿಭಾಗ

**೧. ಅ. ಯಾವುದಾದರೂ ಒಂದು ಪದ್ಯದ ಭಾವಾರ್ಥ ಬರೆಯಿರಿ. 5x1=5**

೪೧. ಪರುಷದ ಗೃಹದೊಳಗಿದ್ದು,ತಿರಿವನೆ ಮನೆಮನೆಯ?
ತೊರೆಯೊಳಗಿದ್ದವನು,ತೃಷೆಯಾಗಲರಸುವನೆ ಕೆರೆಯುದಕವ?
ಮಂಗಳಲಿಂಗ ಅಂಗದ ಮೇಲೆ ಇದ್ದು,
ಅನ್ಯಲಿಂಗಗಳ ನೆನೆವನೆ ನಿಮ್ಮ ಭಕ್ತನು
ಉರಿಲಿಂಗಪೆದ್ದಿಪ್ರಿಯ ವಿಶ್ವೇಶ್ವರಾ?

ಅಥವಾ

೪೨. ಎಲ್ಲರೊಳು ಕಲಿಭೀಮನೇ ಮಿಡು
ಕುಳ್ಳ ಗಂಡನು ಹಾನಿ ಹರಿಬಕೆ
ನಿಲ್ಲದಂಗೈಸುವನು ಕಡು ಹೀಹಾಳಿಯುಳ್ಳವನು
ಖುಲ್ಲನಿವನುಪಟಳವನಾತಂ
ಗೆಳ್ಳವನು ಹೇಳುವೆನು ಬಳಿಕವ
ನಲ್ಲಿ ಹುರುಳಿಲ್ಲದೊಡೆ ಕುಡಿವೆನು ಘೋರತರ ವಿಷವ

## ಭಾಷಾಭ್ಯಾಸ

**ಅ. ಈ ಕೆಳಗಿನ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ. 2x6=12**

೪೩. ಈ ಪದಗಳಿಗೆ ಅರ್ಥ ಬರೆಯಿರಿ.
ಸೂಳ್,ಸಲಿಲ
೪೪. ಈ ಪದಗಳಿಗೆ ನಾನಾರ್ಥ ಬರೆಯಿರಿ.
ಗಂಡ,ಕರ
೪೫. ಈ ಪದಗಳಲ್ಲಿರುವ ಗುಣವಾಚಕಗಳನ್ನು ಗುರುತಿಸಿ
ಮುಖಾಬ್ಜ,ಬೆಳ್ಳಿಲೋಟ
೪೬. ಸ್ವಂತವಾಕ್ಯದಲ್ಲಿ ಬಳಸಿ:
ಬಸವಳಿ,ಗಂಡುಗೂಸು
೪೭. ಕಾಲಸೂಚಕಗಳನ್ನು ಗುರುತಿಸಿ:
ಕಳುಹಿಸಿದ ,ತತ್ತರಿಸುತ್ತಾ
೪೮. ವಿಭಕ್ತಿ ಪ್ರತ್ಯಯಗಳನ್ನು ಗುರುತಿಸಿ.
ಬೆಳಗಿಂದ,ಬಸ್ಸಾಪಿನಲ್ಲಿ
೪೯. ಈ ಪದಗಳಿಗೆ ತದ್ಭವ ರೂಪ ಬರೆಯಿರಿ
ಶ್ರೀ,ಆಯುಷ್ಯ

**ಆ. ಯಾವುದಾದರೂ ಒಂದನ್ನು ಕುರಿತು ಪ್ರಬಂಧ ಬರೆಯಿರಿ. 5x1=5**

೫೦. ಮೂಢನಂಬಿಕೆಗಳು
೫೧. ಹೆಚ್ಚುತ್ತಿರುವ ವೃದ್ಧಾಶ್ರಮಗಳು

**ಇ. ಪತ್ರಲೇಖನ : ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ. 4x1=4**

೫೨ ಶೈಕ್ಷಣಿಕ ಪ್ರವಾಸಕ್ಕೆ ಅನುಮತಿ ಕೋರಿ ತಂದೆ/ತಾಯಿಗೆ ಪತ್ರ ಬರೆಯಿರಿ:
೫೩. ಗ್ರಂಥಾಲಯ ಸುಧಾರಣೆಗಾಗಿ ಗ್ರಂಥಪಾಲಕರಿಗೆ ಪತ್ರ ಬರೆಯಿರಿ:

**ಈ. ಈ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ. 4x1=4**

೫೪. ಅಪಾಯ ಬಂದಾಗ ಉಪಾಯದಿಂದ ಗೆಲ್ಲಬೇಕು.
೫೫. ಜಾಣನಿಗೆ ಮಾತಿನ ಪೆಟ್ಟು,ದಡ್ಡನಿಗೆ ದೊಣ್ಣೆ ಪೆಟ್ಟು.

**********************************